**ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಮರಿತಿಬ್ಬೇಗೌಡ ಇವರು ನಿಯಮ 72 ರಡಿಯಲ್ಲಿ ಪ್ರಸ್ತಾಪಿಸಿರುವ ಸೂಚನೆ.**

**ವಿಷಯ**

ರಾಜ್ಯದ ಪದವಿ ಕಾಲೇಜು ಹಾಗೂ ವಿಶ್ವವಿದ್ಯಾನಿಲಯಗಳಲ್ಲಿ ಖಾಲಿ ಇರುವ ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡದೆ ಇರುವುದರಿಂದ ಶೈಕ್ಷಣಿಕ ಗುಣಮಟ್ಟ ಕುಂಠಿತವಾಗುತ್ತಿರುವುದರಿಂದ ಉಂಟಾಗಿರುವ ಗಂಭೀರ ಸಮಸ್ಯೆ ಕುರಿತು.

**ಸರ್ಕಾರದ ಹೇಳಿಕೆ**

**ಕಾಲೇಜು ಶಿಕ್ಷಣ**

ಕಾಲೇಜು ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಒಟ್ಟು 154 ಗ್ರೂಪ್-ಬಿ ಬ್ಯಾಕ್‌ಲಾಗ್ ಹುದ್ದೆಗಳನ್ನು (ಪರಿಶಿಷ್ಟ ಜಾತಿ-121 ಮತ್ತು ಪರಿಶಿಷ್ಟ ಪಂಗಡ-33) ಗುರುತಿಸಲಾಗಿದ್ದು, ಸದರಿ 154 ಹುದ್ದೆಗಳ ಪೈಕಿ 152 ಸಹಾಯಕ ಪ್ರಾಧ್ಯಾಪಕರ ಹುದ್ದೆಗಳನ್ನು 2015ರ ನೇಮಕಾತಿ ಪ್ರಕ್ರಿಯೆಯಲ್ಲಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮೂಲಕ ಭರ್ತಿ ಮಾಡಲು ಕ್ರಮಕೈಗೊಳ್ಳಲಾಗಿತ್ತು. ಇನ್ನುಳಿದ 2 ಹುದ್ದೆಗಳನ್ನು (ತಮಿಳು ಮತ್ತು ಸಂಖ್ಯಾಶಾಸ್ತ್ರ) ಕಾರ್ಯಭಾರದ ಕೊರತೆಯಿಂದ ಭರ್ತಿ ಮಾಡಲು ಕ್ರಮವಹಿಸಲಾಗಿಲ್ಲ. 2015ರ ನೇಮಕಾತಿ ಪ್ರಕ್ರಿಯೆಯಲ್ಲಿ ಭರ್ತಿ ಮಾಡಲು ಅಧಿಸೂಚಿಸಲಾದ 152 ಹುದ್ದೆಗಳ ಪೈಕಿ ಈವರೆವಿಗೆ 116 (ಪರಿಶಿಷ್ಟ ಜಾತಿ-94 ಮತ್ತು ಪರಿಶಿಷ್ಟ ಪಂಗಡ-22) ಹುದ್ದೆಗಳನ್ನು ಭರ್ತಿ ಮಾಡಲಾಗಿದೆ. ಉಳಿದಂತೆ ಒಟ್ಟು 36 (ಪರಿಶಿಷ್ಟ ಜಾತಿ-26 ಮತ್ತು ಪರಿಶಿಷ್ಟ ಪಂಗಡ-10) ಹುದ್ದೆಗಳನ್ನು ಭರ್ತಿ ಮಾಡಬೇಕಾಗಿದ್ದು, ಇದರಲ್ಲಿ 13 ಹುದ್ದೆಗಳಿಗೆ ಆಯ್ಕೆಗೊಂಡ ಅಭ್ಯರ್ಥಿಗಳಿಗೆ ನೇಮಕಾತಿ ಆದೇಶ ನೀಡುವ ಸಂಬಂಧ ವಿವಿಧ ಕಾರಣಗಳ ಹಿನ್ನಲೆಯಲ್ಲಿ (ನ್ಯಾಯಾಲಯ ಪ್ರಕರಣ, ಸಕ್ಷಮ ಪ್ರಾಧಿಕಾರಗಳಿಂದ ನೈಜತೆ ವರದಿಗಳು ಬಾರದೇ ಇರುವುದು / ಹೆಚ್ಚುವರಿ ಬದಲಿ ಅಭ್ಯರ್ಥಿ ಆಯ್ಕೆ) ಸರ್ಕಾರದ ಪರಿಶೀಲನೆಯಲ್ಲಿದೆ. ಉಳಿದಂತೆ 23 ಹುದ್ದೆಗಳಿಗೆ ವಿವಿಧ ವಿಷಯಗಳಲ್ಲಿ ಅರ್ಹ ಅಭ್ಯರ್ಥಿಗಳ ಅಲಭ್ಯತೆಯಿಂದಾಗಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಅಭ್ಯರ್ಥಿಗಳ ಆಯ್ಕೆ ಆಗಿರುವುದಿಲ್ಲ.

ರಾಜ್ಯದ ಕಲ್ಯಾಣ-ಕರ್ನಾಟಕ ವೃಂದದಲ್ಲಿ ಬಡ್ತಿ ಮೂಲಕ ತುಂಬಬೇಕಾಗಿರುವ ಬೋಧಕೇತರ ಒಟ್ಟು-15 ಬ್ಯಾಕ್‌ಲಾಗ್ ಹುದ್ದೆಗಳಿಗೆ ಬಡ್ತಿ ನೀಡಲು ಈಗಾಗಲೇ ಅಗತ್ಯ ಕ್ರಮ ಕೈಗೊಳ್ಳಲಾಗುತ್ತಿದೆ.

ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ ಈವರೆವಿಗೆ ಗುರುತಿಸಲಾದ 1190 ಬ್ಯಾಕ್‌ಲಾಗ್ ಹುದ್ದೆಗಳ ಪೈಕಿ ಈಗಾಗಲೇ 803 ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡಲಾಗಿದೆ. 387 ಬ್ಯಾಕ್‌ಲಾಗ್ ಹುದ್ದೆಗಳು ಭರ್ತಿ ಮಾಡಲು ಬಾಕಿ ಇರುತ್ತದೆ.

ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ ಮಂಜೂರಾದ ಖಾಲಿ ಹುದ್ದೆ ಹಾಗೂ ಅದಕ್ಕೆ ತಕ್ಕಂತೆ ಕಾರ್ಯಭಾರ ಇದ್ದಲ್ಲಿ ಮಾತ್ರ ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡಲು ಅವಕಾಶವಿರುತ್ತದೆ. ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ ಪ್ರತಿ ವರ್ಷ ವಿವಿಧ ವಿಷಯಗಳಲ್ಲಿ ಕಾರ್ಯಭಾರ ಕುಸಿಯುತ್ತಿರುವುದರಿಂದ ಈಗಾಗಲೇ ಗುರುತಿಸಲಾದ ಬ್ಯಾಕ್‌ಲಾಗ್ ಹುದ್ದೆಗಳಲ್ಲಿ ಮಂಜೂರಾದ ಖಾಲಿ ಹುದ್ದೆ ಇದ್ದರೂ ಸಹ ನಿಗದಿತ ಕಾರ್ಯಭಾರ ಇಲ್ಲದೇ ಇರುವುದರಿಂದ ಬೋಧಕರ ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡಲು ಸಾಧ್ಯವಾಗುತ್ತಿಲ್ಲ. ಆದರೂ ಸಹ ಬ್ಯಾಕ್‌ಲಾಗ್ ಹುದ್ದೆಗಳನ್ನು ಆಧ್ಯತೆಯ ಮೇರೆಗೆ ಭರ್ತಿ ಮಾಡಬೇಕಾಗಿರುವುದರಿಂದ ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ ಮಂಜೂರಾದ ಖಾಲಿ ಹುದ್ದೆ ಇದ್ದರೂ ಸಹ ನಿಗಧಿತ ಕಾರ್ಯಭಾರ ಇಲ್ಲದಿರುವಂತಹ ಬೋಧಕರ ಬ್ಯಾಕ್‌ಲಾಗ್ ಹುದ್ದೆಗಳನ್ನು ಕಾರ್ಯಭಾರವಿರುವ ವಿಷಯಗಳಿಗೆ ಹುದ್ದೆ ಪರಿವರ್ತನೆ ಮಾಡಿ ಕೂಡಲೇ ಭರ್ತಿ ಮಾಡಲು ಸೂಕ್ತ ಕ್ರಮ ಕೈಗೊಳ್ಳುವಂತೆ ಪ್ರಾದೇಶಿಕ ಜಂಟಿ ನಿರ್ದೇಶಕರ ಮೂಲಕ ಎಲ್ಲಾ ಆಡಳಿತ ಮಂಡಳಿಗಳಿಗೆ ತಿಳಿಸಲಾಗಿದೆ.

ದಿನಾಂಕ:01-09-2017ರ ಸರ್ಕಾರದ ಪತ್ರ ಸಂಖ್ಯೆ:ಇಡಿ 240 ಯುಪಿಸಿ 2014 ರಲ್ಲಿ ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ ದಿನಾಂಕ:31-12-2015 ರೊಳಗೆ ಖಾಲಿ ಇರುವ, ಮಂಜೂರಾದ ಬೋಧಕ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಅನುಮತಿ ನೀಡಿದೆ. ಅದರಂತೆ ಖಾಸಗಿ ಅನುದಾನಿತ ಆಡಳಿತ ಮಂಡಳಿಗಳು ಹುದ್ದೆ ಭರ್ತಿ ಮಾಡಲು ಕಾಲೇಜು

ಶಿಕ್ಷಣ ಇಲಾಖೆಗೆ ಅನುಮತಿ ಕೋರಿ ಪ್ರಸ್ತಾವನೆಯನ್ನು ಸಲ್ಲಿಸುತ್ತಿದ್ದು, ಖಾಲಿ ಹುದ್ದೆ ಭರ್ತಿ ಮಾಡುವ ಸಂದರ್ಭದಲ್ಲಿಯೂ ಸಹ ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡಲು ಆದ್ಯತೆ ಮೇರೆಗೆ ಕ್ರಮ ತೆಗೆದುಕೊಳ್ಳಲಾಗುತ್ತಿದೆ. ಈ ರೀತಿ ನಿಯಮಾನುಸಾರ ಕ್ರಮ ಕೈಗೊಂಡರೂ ಸಹ ನಿಗಧಿತ ಕಾರ್ಯಭಾರ ಇಲ್ಲದಿರುವಂತಹ ಬ್ಯಾಕ್‌ಲಾಗ್ ಹುದ್ದೆಗಳಿಗೆ ಭವಿಷ್ಯದಲ್ಲಿ ಕಾರ್ಯಭಾರ ಉದ್ಭವಿಸಿದ ಕೂಡಲೇ ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುವುದು.

## ವಿಶ್ವವಿದ್ಯಾನಿಲಯ

ರಾಜ್ಯದ ಈ ಕೆಳಕಂಡ ೧೧ ವಿಶ್ವವಿದ್ಯಾಲಯಗಳಲ್ಲಿ ಬೋಧಕ ವೃಂದದಲ್ಲಿ ಗುರುತಿಸಲ್ಪಟ್ಟ ಬ್ಯಾಕ್‌ಲಾಗ್ ಹುದ್ದೆಗಳ ವಿವರ ಹಾಗೂ ಅವುಗಳಲ್ಲಿ ಭರ್ತಿಯಾಗಿರುವ ಮತ್ತು ಖಾಲಿ ಇರುವ ಹುದ್ದೆಗಳ ಅಂಕಿ ಅಂಶಈ ಕೆಳಕಂಡಂತಿದೆ.

| ಕ್ರ.ಸಂ. | ವಿಶ್ವವಿದ್ಯಾಲಯದ ಹೆಸರು | ಗುರುತಿಸಲ್ಪಟ್ಟ ಬೋಧಕ ಹುದ್ದೆಗಳ ವಿವರ | ಭರ್ತಿಯಾದ ಹುದ್ದೆಗಳ ವಿವರ | ಖಾಲಿ ಇರುವ ಹುದ್ದೆಗಳ ವಿವರ |
|---|---|---|---|---|
| 1 | ಬೆಂಗಳೂರು ವಿಶ್ವವಿದ್ಯಾಲಯ | 55 | 35 | 20 |
| 2 | ಮಂಗಳೂರು ವಿಶ್ವವಿದ್ಯಾಲಯ | 67 | 61 | 06 |
| 3 | ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ | 49 | 38 | 11 |
| 4 | ಕರ್ನಾಟಕ ವಿಶ್ವವಿದ್ಯಾಲಯ | 126 | 101 | 25 |
| 5 | ಕುವೆಂಪು ವಿಶ್ವವಿದ್ಯಾಲಯ | 35 | 34 | 01 |
| 6 | ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯ | 01 | 00 | 01 |
| 7 | ಮೈಸೂರು ವಿಶ್ವವಿದ್ಯಾಲಯ | 76 | 00 | 76 |
| 8 | ಗುಲ್ಬರ್ಗ ವಿಶ್ವವಿದ್ಯಾಲಯ | 08 | 08 | 00 |
| 9 | ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯ | 15 | 13 | 02 |
| 10 | ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯ | 03 | 02 | 01 |
| 11 | ತುಮಕೂರು ವಿಶ್ವವಿದ್ಯಾಲಯ | 11 | 03 | 08 |

ಮುಂದುವರೆದು, ವಿಜಯನಗರ ಶ್ರೀಕೃಷ್ಣದೇವರಾಯ, ದಾವಣಗೆರೆ, ರಾಣಿ ಚೆನ್ನಮ್ಮ, ಕನ್ನಡ, ಜಾನಪದ, ಬೆಂಗಳೂರು ಉತ್ತರ, ಬೆಂಗಳೂರು ಕೇಂದ್ರ ಮತ್ತು ಕರ್ನಾಟಕ ರಾಜ್ಯ ಡಾ: ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾಲಯಗಳು ನೂತನ ವಿಶ್ವವಿದ್ಯಾಲಯಗಳಾಗಿವೆ, ಈ ವಿಶ್ವವಿದ್ಯಾಲಯಗಳಲ್ಲಿ ಬ್ಯಾಕ್‌ಲಾಗ್ ಹುದ್ದೆಗಳು ಉದ್ಭವವಾಗಿರುವುದಿಲ್ಲ.

ಸರ್ಕಾರದ ಆದೇಶ ಸಂಖ್ಯೆ ಇಡಿ 21 ಯುಎನ್‌ಈ 2019, ದಿನಾಂಕ:08-03-2019ರಲ್ಲಿ ವಿಶ್ವವಿದ್ಯಾಲಯಗಳಲ್ಲಿ ಖಾಲಿ ಇರುವ ಬ್ಯಾಕ್‌ಲಾಗ್ ಹುದ್ದೆಗಳನ್ನು ತ್ವರಿತಗತಿಯಲ್ಲಿ ಭರ್ತಿ ಮಾಡಲು ಕ್ರಮವಹಿಸುವಂತೆ ಎಲ್ಲಾ ವಿಶ್ವವಿದ್ಯಾಲಯಗಳಿಗೂ ಈಗಾಗಲೇ ತಿಳಿಸಲಾಗಿದೆ.

ಇಡಿ 69 ಯುಪಿಸಿ 2020

(ಡಾ: ಅಶ್ವಥ್ ನಾರಾಯಣ ಸಿ.ಎನ್.)
ಉಪ ಮುಖ್ಯಮಂತ್ರಿಗಳು (ಉನ್ನತ ಶಿಕ್ಷಣ)